# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ: 07/08/2021 ರಂದು ಬೆಳಿಗ್ಗೆ 11.30 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಿಂಗಸಂದ್ರ ವಾರ್ಡ್ ಸಂಖ್ಯೆ-191 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ಪ್ರಸನ್ನಕುಮಾರ.ವಿ. ಉಪ-ಆಯುಕ್ತರು ರವರ ಸಮ್ಮುಖದಲ್ಲಿ ಅವರ ಅನುಮತಿಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ಪ್ರಾರಂಭದಲ್ಲಿ ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಎ.ಪಿ.ಶಿವಕುಮಾರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-191, ಸಿಂಗಸಂದ್ರ ರವರು ಸಭೆಗೆ ಹಾಜರಾಗಿರುವ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

ಹಿಂದಿನ ಸಭೆಯ ನಡಾವಳಿಗಳನ್ನು ಸಭೆಯಲ್ಲಿ ಮಂಡಿಸಿ ಸಂಬಂಧಪಟ್ಟ ಅಧಿಕಾರಿಗಳಿಂದ ಹಿಂದಿನ ಸಭೆಯ ನಡಾವಳಿಗಳ ಪಾಲನೆಯ ಬಗ್ಗೆ ಮಾಹಿತಿ ಪಡೆಯಲಾಯಿತು. ಅದರಂತೆ ಇಂದಿನ ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು ಈ ಕೆಳಕಂಡಂತಿರುತ್ತದೆ.

1.ಕೋವಿಡ್-19 ಮಹಾಮಾರಿ ಸಾಂಕ್ರಮಿಕರೋಗ ಹರಡದಂತೆ ಮುಂಜಾಗ್ರತಕ್ರಮ ಕೈಗೊಳ್ಳಲು ತೆಗೆದುಕೊಳ್ಳಬಹುದಾದ ಕ್ರಮಗಳು.

2.ವಿಪತ್ತು ನಿರ್ವಹಣಾ ಸಮಿತಿ(ಡಿಸಾಸ್ಟರ್ ಮ್ಯಾನೇಜಮೆಂಟ್‌ಕಮಿಟಿ) ನಿರ್ವಹಿಸಬೇಕಾದ ಕ್ರಮಗಳ ಬಗ್ಗೆ.

3.ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವುದು.

4.ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸುವುದು,

5.ಮಳೆಯಿಂದ ಸಂಭವಿಸಿದ/ ಸಂಭವಿಸಬಹುದಾದ ಅನಾಹುತಗಳ ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸುವುದು,

6.BWSSB Project ಮತ್ತು ನಿರ್ವಹಣೆಯ ಬಗ್ಗೆ ಚರ್ಚಿಸುವುದು,

7.ಕುಡಿಯುವನೀರು ಸರಬರಾಜು ಬಗ್ಗೆಚರ್ಚಿಸುವುದು,

8.ಗೇಲ್‌ಗ್ಯಾಸ್ ಪೈಪ್ ಲೈನ್ ನಿರ್ವಹಣೆಯ ಬಗ್ಗೆ ಚರ್ಚಿಸುವುದು.

ಸಭೆಯ ನಡಾವಳಿಗಳು

1. ವಾರ್ಡ್ ನಂ 191 ಸಿಂಗಸಂದ್ರ ವ್ಯಾಪ್ತಿಯಲ್ಲಿ ಬರುವ ಕೂಡ್ಲು ಗ್ರಾಮದ ವಿನಾಯಕ ನಗರದಲ್ಲಿ ವಾರಕ್ಕೊಮ್ಮೆ ಸ್ಯಾನಿಟರಿ ಬ್ಲಾಕ್ ಆಗುತ್ತಿದೆ. ಮತ್ತು ಮ್ಯಾನ್ ಹೋಲ್ ನಲ್ಲಿ ಸಿಲ್ಟ್ ತುಂಬಿ ನೀರು ಸರಾಗವಾಗಿ ಹೋಗುವುದಿಲ್ಲ, ಅದನ್ನು ಸರಿಪಡಿಸಬೇಕೆಂದು ಸ್ಥಳಿಯರು ದೂರನ್ನು ನೀಡಿದರು. ಬಿ.ಡಬ್ಲ್ಯು.ಎಸ್.ಎಸ್.ಬಿ ಯವರು ಒಳಚರಂಡಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಬೇಕೆಂದು ನೋಡಲ್ ಅಧಿಕಾರಿಗಳು ಬಿ.ಡಬ್ಲ್ಯು.ಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ಸೂಚಿಸಿದರು. ಹಾಗೂ ಸಿಲ್ಟ್ ಗಾಡಿ ಕೂಡ ವಾರ್ಡ್‌ಗೆ ಕಳಿಸಿಕೊಡಲು ಸೂಚನೆ ನೀಡಿದರು.

2. ವಾರ್ಡ್ ವ್ಯಾಪ್ತಿಯಲ್ಲಿ ಬೇರೆ ಪ್ರದೇಶಗಳಲ್ಲಿ ಕಾವೇರಿ ನೀರು ಕೊಡುತ್ತಿದ್ದು, ಕೂಡ್ಲು ಕಾಲೋನಿಯಲ್ಲಿ ಕಾವೇರಿ ನೀರು ಸರಬರಾಜು ಇರುವುದಿಲ್ಲ, ಇದರ ಬಗ್ಗೆ ಗಮನಹರಿಸಬೇಕೆಂದು ನೋಡಲ್ ಅಧಿಕಾರಿಗಳು ಬಿ.ಡಬ್ಲ್ಯು.ಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ಸೂಚಿಸಿದರು.

3. ವಾರದಲ್ಲಿ ಎರಡು ದಿನ ಅಂದರೆ ಮಂಗಳವಾರ ಗುರುವಾರ ಸಿಲ್ಟ್ ಗಾಡಿ ಕಳುಹಿಸುತ್ತೇನೆ ಎಂದು ಬಿ.ಡಬ್ಲ್ಯು.ಎಸ್.ಎಸ್.ಬಿ ಸಹಾಯಕ ಅಭಿಯಂತರು ಸಭೆಯಲ್ಲಿ ತಿಳಿಸಿದರು.

4. ವಾರ್ಡ್ ವ್ಯಾಪ್ತಿಯಲ್ಲಿ ಗೇಲ್‌ಗ್ಯಾಸ್ ಕೇಬಲ್‌ಗಳು ಮತ್ತು ಕೆ.ಇ.ಬಿ ಕೇಬಲ್‌ಗಳು ಇದ್ದು, ಎಷ್ಟು ಆಳದಲ್ಲಿ ಹಾಕಿದ್ದಾರೆ ಮತ್ತು ಎಲ್ಲೆಲ್ಲಿ ಹಾಕಿದ್ದಾರೆ ಎಂಬುದರ ಬಗ್ಗೆ ವಿವರ ನೀಡಲು ನೋಡಲ್ ಅಧಿಕಾರಿಗಳು ಕೆ.ಇ.ಬಿ ಸಹಾಯಕ ಅಭಿಯಂತರರು ಮತ್ತು ಗೇಲ್ ಗ್ಯಾಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

5. ಕೂಡ್ಲು ಗ್ರಾಮದ ಅಂಬೇಡ್ಕರ್ ಕಾಲೋನಿಯಲ್ಲಿ ನಾಲ್ಕು ರಸ್ತೆಗಳಲ್ಲಿ ಸಿಲ್ಟ್ ತೆಗೆಯಬೇಕು. ಎಂದು ಸ್ಥಳಿಯರಾದ ಶ್ರೀ ಚಿಕ್ಕಮುನಿಯಪ್ಪರವರು ತಿಳಿಸಿದರು. ಬಿ.ಡಬ್ಲ್ಯು.ಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

6. ಬಿ.ಡಬ್ಲ್ಯು.ಎಸ್.ಎಸ್.ಬಿಯವರು ತುರ್ತಾಗಿ ಆದಷ್ಟು ಬೇಗ ಒಳಚರಂಡಿ ಕೆಲಸ ಪೂರ್ಣಗೊಳಿಸಿದರೆ ವಾರ್ಡ್‌ನಲ್ಲಿ ಇರುವ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸಾಧ್ಯವಾಗುತ್ತದೆ. ಎಂದು ಬಿ.ಬಿ.ಎಂ.ಪಿ ಸಹಾಯಕ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

7. ಕೂಡ್ಲು ಗ್ರಾಮದ ವಿನಾಯಕ ನಗರ 3ನೇ ಕ್ರಾಸ್ ಮತ್ತು ಅಂಬೇಡ್ಕರ್ ಕಾಲೋನಿಯಲ್ಲಿ ಒಂದೊಂದು ವಿದ್ಯುತ್ ಕಂಬಗಳನ್ನು ಅಳವಡಿಸಬೇಕೆಂದು ಸ್ಥಳಿಯರು ತಿಳಿಸಿದರು. ಅದಕ್ಕೆ ಕೆ.ಇ.ಬಿ ಸಹಾಯಕ ಅಭಿಯಂತರರು ವಿದ್ಯುತ್ ಕಂಬ ಅಳವಡಿಸಲು ಸಭೆಯಲ್ಲಿ ಒಪ್ಪಿಕೊಂಡಿರುತ್ತಾರೆ.

8. ಸಿಂಗಸಂದ್ರ ವಾರ್ಡ್ ವ್ಯಾಪ್ತಿಯಲ್ಲಿ ಕಸದ ಟಿಪ್ಪರ್ ಗಾಡಿಗಳನ್ನು ಎಲ್ಲಾ ಸೂಪರ್ ವೈಸರ್ ಗಳಿಗೆ ಸಮನಾಗಿ ನೀಡಬೇಕೆಂದು ಸ್ಥಳಿಯರಾದ ಸಮಿತಿ ಸದಸ್ಯರು ಶ್ರೀ ಶಂಕರ್ ರವರು ಸಭೆಯಲ್ಲಿ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.

9. ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ 18 ವರ್ಷ ಮೇಲ್ಪಟ್ಟ ಸಾರ್ವಜನಿಕರಿಗೆ ವ್ಯಾಕ್ಸಿನ್ ಬಂದಿದ್ದು, ಅದನ್ನು ಸಮರ್ಪಕವಾಗಿ ನೀಡಲಾಗುತ್ತದೆ. ಎಂದು ಪ್ರಾಥಮಿಕ ಆರೋಗ್ಯ ಕೇಂದ್ರ ವೈಧ್ಯಾಧಿಕಾರಿಯಾದ ಡಾ॥ ನವೀನ್ ರವರು ಸಭೆಯಲ್ಲಿ ತಿಳಿಸಿದರು.

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ 191 ಸಿಂಗಸಂದ್ರ

ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ 191, ಸಿಂಗಸಂದ್ರ

**ಪ್ರತಿಗಳು:-**

1) ಮಾನ್ಯ ಆಡಳಿತಗಾರರು, ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
2) ಮಾನ್ಯ ಆಯುಕ್ತರು, ಬೃ.ಬೆಂ.ಮ.ಪಾಲಿಕೆ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
3) ಮಾನ್ಯ ಶಾಸಕರು, ಬೊಮ್ಮನಹಳ್ಳಿ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
4) ಮಾನ್ಯ ಶಾಸಕರು, ಬೆಂಗಳೂರು ದಕ್ಷಿಣ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
5) ಮಾನ್ಯ ಶಾಸಕರು, ಆನೇಕಲ್ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
6) ವಲಯ ಆಯುಕ್ತರು, ಬೊಮ್ಮನಹಳ್ಳಿ ವಲಯ, ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ
7) ಜಂಟಿ ಆಯುಕ್ತರು, ಬೊಮ್ಮನಹಳ್ಳಿ ವಲಯರವರ ಅವಗಾಹನೆಗೆ ಮಂಡಿಸಿದೆ.
8) ಉಪ ಆಯುಕ್ತರು, ಬೊಮ್ಮನಹಳ್ಳಿ ವಲಯರವರ ಅವಗಾಹನೆಗೆ ಮಂಡಿಸಿದೆ
9) ಮುಖ್ಯ ಅಭಿಯಂತರರು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ

10ಆರೋಗ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ

11) ಅರಣ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ

12) ಡಿ.ಜಿ.ಎಂ. ಗೇಲ್‌ಗ್ಯಾಸ್‌ರವರಿಗೆ ಮುಂದಿಸ ಕ್ರಮಕ್ಕಾಗಿ,

13) ಮುಖ್ಯಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ. ರವರ ಅವಗಾಹನೆಗೆ ಕಳುಹಿಸಿದೆ

14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕಾಗಿ

15)ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಎಂ.ಆರ್.ಸಿ.ಎಲ್ ರವರಿಗೆ ಮುಂದಿನ ಕ್ರಮಕ್ಕಾಗಿ

16) ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ, ಬೃ.ಬೆಂ.ಮ.ಪಾ. ರವರಿಗೆ ಮುಂದಿನ ಕ್ರಮಕ್ಕಾಗಿ

17) ಪಿ.ಎಸ್.ಐ. ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ, ಪರಪ್ಪನಅಗ್ರಹಾರಠಾಣೆ,

18) ಕಂದಾಯ ಅಧಿಕಾರಿ (ಬೇಗೂರು) ವಲಯರವರ ಅವಗಾಹನೆಗೆ ಮಂಡಿಸಿದೆ

19) ವಾರ್ಡ್ ಸಮಿತಿ ಸದಸ್ಯರು ರವರಿಗೆ ಕಳುಹಿಸಲಾಗಿದೆ.

20)ಕಛೇರಿಕಡತಕ್ಕೆ